**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಾ.ತಳವಾರ ಸಾಬಣ್ಣ ಇವರ ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

ರಾಜ್ಯದ ಗ್ರಾಮೀಣ ಭಾಗದಿಂದ ಉನ್ನತ ಶಿಕ್ಷಣ ಪಡೆಯಲು ಆಗಮಿಸುತ್ತಿರುವ ಯುವಕ/ಯುವತಿಯರಿಗೆ ದಾರಿದೀಪವಾಗಬೇಕಾಗಿದ್ದ ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಗೊಂದಲದ ಗೂಡುಗಳಾಗಿ, ಸಮಸ್ಯೆಗಳ ತಾಣವಾಗಿ ಅಧೋಗತಿ ದಾರಿಗೆ ಸಾಗುತ್ತಿರುವುದು ತೀರಾ ಶೋಚನೀಯ ಸ್ಥಿತಿಯಾಗಿದೆ. ಮೂಲಭೂತ ಸೌಕರ್ಯಗಳ ಕೊರತೆ ಪ್ರಾಧ್ಯಾಪಕರುಗಳ ಕೊರತೆ, ಜಾತಿಯತೆ, ಭ್ರಷ್ಟಾಚಾರ, ಉದ್ಯೋಗ ಮುಖಿ ಕೋರ್ಸುಗಳ ಕೊರತೆ ಹೀಗೆ ಹಲವಾರು ಸಮಸ್ಯೆಗಳಿಂದ ಬಳಲುತ್ತಿರುವ ವಿಶ್ವವಿದ್ಯಾಲಯಗಳು ಇಂದು ಭವಿಷ್ಯ ಅರಿಸಿಕೊಂಡು ಬರುವ ಗ್ರಾಮೀಣ ಪ್ರದೇಶದ ಬಡ ಯುವಕ/ಯುವತಿಯರಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗಿದೆ. ಈ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳ ಆಧಾರ ಸ್ತಂಭವಾಗಬೇಕಿದ್ದ ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳ ಸಮಸ್ಯೆಗಳು, ಅಧೋಗತಿ ಮತ್ತು ಕುಸಿಯುತ್ತಿರುವ ಗುಣಮಟ್ಟದ ಕುರಿತು ನಿಯಮ 72ರಡಿಯಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ಕರ್ನಾಟಕ ರಾಜ್ಯದಲ್ಲಿ 32 ಸಾರ್ವಜನಿಕ ವಿಶ್ವವಿದ್ಯಾಲಯಗಳಿವೆ. ಸದರಿ ವಿಶ್ವವಿದ್ಯಾಲಯಗಳಲ್ಲಿ ಪ್ರಮುಖವಾಗಿ ಮೂಲಭೂತ ಸೌಕರ್ಯಗಳ ಕೊರತೆ ಮತ್ತು ಬೋಧಕ ಮತ್ತು ಬೋಧಕೇತರ ಹುದ್ದೆಗಳು ಭರ್ತಿಯಾಗದಿರುವುದು ಹಾಗೂ ಇತರೆ ಸಮಸ್ಯೆಗಳನ್ನು ಎದುರಿಸುತ್ತಿರುವುದನ್ನು ಸರ್ಕಾರವು ಗಮನಿಸಿದೆ. ಈ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಪ್ರಮುಖವಾಗಿ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಭರ್ತಿ ಮಾಡುವ ಸಂಬಂಧ ಖಾಲಿ ಇರುವ ಈ ಹುದ್ದೆಗಳಿಗೆ ಒಳಮೀಸಲಾತಿಯನ್ವಯ ರೋಸ್ಟರ್ ಬಿಂದುಗಳನ್ನು ಗುರುತಿಸಿಕೊಂಡು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಲಾಗಿದ್ದು, ಅದರಂತೆ ವಿಶ್ವವಿದ್ಯಾಲಯಗಳು ಪ್ರಸ್ತಾವನೆ ಸಲ್ಲಿಸಿದ್ದಲ್ಲಿ ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದು. ಅಲ್ಲದೇ ಇತ್ತೀಚೆಗೆ ಕರ್ನಾಟಕ ಉಚ್ಚ ನ್ಯಾಯಾಲಯವು ಮೀಸಲಾತಿಯನ್ನು ಶೇ.56 ಕ್ಕೆ ಏರಿಸಿರುವುದಕ್ಕೆ ಸಂಬಂಧಿಸಿದಂತೆ ತಡೆಯಾಜ್ಞೆಯನ್ನು ನೀಡಿದ್ದು, ಅದರನ್ವಯ ಯಾವುದೇ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಬಾರದೆಂದು ನ್ಯಾಯಾಲಯವು ನಿರ್ದೇಶನ ನೀಡಿರುತ್ತದೆ.

ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 55 ಮತ್ತು 56 ರಲ್ಲಿ ಪ್ರದತ್ತ ಅಧಿಕಾರದನ್ವಯ ವಿಶ್ವವಿದ್ಯಾಲಯದ ಕುಲಪತಿಗಳು ಅರೆಕಾಲಿಕ, ತಾತ್ಕಾಲಿಕವಾಗಿ ಅರ್ಹ ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರುಗಳನ್ನು ನೇಮಕಮಾಡಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿವೆ.

ರಾಜ್ಯದಲ್ಲಿ ವಿಶ್ವವಿದ್ಯಾಲಯಗಳು ಸಂಶೋಧನೆ, ಪಠ್ಯಕ್ರಮ, ಉದ್ಯೋಗಾವಕಾಶ ಮತ್ತು ಡಿಜಿಟಲ್ ಕಲಿಕೆಗಳನ್ನು ಉತ್ತೇಜಿಸಿ ಎಲ್ಲಾ ಪ್ರದೇಶಗಳು ಮತ್ತು ಸಮುದಾಯಗಳಿಗೆ ತಲುಪುವಂತೆ ಮಾಡಲು ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬದ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಪ್ರೋತ್ಸಾಹಕ್ಕಾಗಿ ರಾಜ್ಯ ಸರ್ಕಾರದಿಂದ ಹಲವಾರು ಯೋಜನೆಗಳನ್ನು ಕೈಗೊಳ್ಳಲಾಗಿದೆ. ಉದ್ಯೋಗ ಮತ್ತು ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಲು ಅಜೀಂ ಪ್ರೇಮ್‌ಜೀ, ಎಚ್‌ಪಿ, ಟೊಯೋಟೋ, ಇನ್‌ಫೋಸಿಸ್ ಮುಂತಾದ ಕೈಗಾರಿಕೋದ್ಯಮ ಸಂಸ್ಥೆಗಳೊಂದಿಗೆ MoU ಮೂಲಕ ಒಡಂಬಡಿಕೆ ಮಾಡಿಕೊಂಡು ಶಿಕ್ಷಣವನ್ನು ನೀಡಲಾಗುತ್ತಿದೆ. ಉದ್ಯೋಗ ಸೃಷ್ಠಿಸುವಂತಹ ಬಿಸಿಎ ಮತ್ತು ಬಿಬಿಎ ಕೋರ್ಸ್ ಗಳನ್ನು ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿದ್ದು, ಇಂತಹ ಯೋಜನೆಗಳು ಉದ್ಯೋಗಮುಖಿಯಾಗಿ ಕಾರ್ಯನಿರ್ವಹಿಸಲು ಸಹಾಯಕವಾಗುತ್ತಿದ್ದು, ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉದ್ಯೋಗವಕಾಶ ಕಲ್ಪಿಸಲು ಸಹಕಾರಿಯಾಗಿದೆ.

ಮುಂದುವರೆದು, ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಪರಾಮರ್ಶಿಸಲು ಸರ್ಕಾರವು ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿದೆ. ಸದರಿ ಸಮಿತಿಯು ಈಗಾಗಲೇ 2 ಸಭೆಗಳನ್ನು ನಡೆಸಿದ್ದು, ಅದರಲ್ಲಿ ದಿನಾಂಕ:09-05-2025 ರಂದು ನಡೆದ ಸಚಿವ ಸಂಪುಟ ಉಪ ಸಮಿತಿಯಲ್ಲಿ ಒಂದು ವಿಶ್ವವಿದ್ಯಾಲಯವು ರಾಜ್ಯದಲ್ಲಿ ಕ್ಷಮತೆಯಿಂದ ಕಾರ್ಯ ನಿರ್ವಹಿಸಲು ಅಗತ್ಯವಿರುವ ಕಾಲೇಜುಗಳ ಸಂಖ್ಯೆ ಆರ್ಥಿಕ ವರಮಾನ ನೇಮಕಾತಿ ಹಾಗೂ ಪಿಂಚಣಿ ಮುಂತಾದ ಆಡಳಿತಾತ್ಮಕ ಮತ್ತು ಶೈಕ್ಷಣಿಕ ವಿಷಯಗಳ ಕುರಿತು ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ಅಂತಿಮ ನಿರ್ಧಾರ ಕೈಗೊಳ್ಳಬೇಕಿರುವ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯೊಂದಿಗೆ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ವರದಿಯನ್ನು ಸಲ್ಲಿಸುವಂತೆ ತಿಳಿಸಿದೆ. ಅದರಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಈ ಬಗ್ಗೆ ಸಚಿವ ಸಂಪುಟ ಉಪ ಸಮಿತಿಯು ಶೀಘ್ರದಲ್ಲಿ ಸಭೆಯನ್ನು ನಡಸಲಿದ್ದು, ಸದರಿ ಸಭೆಯಲ್ಲಿ ಕೈಗೊಳ್ಳುವ ತೀರ್ಮಾನದನ್ವಯ ಮುಂದಿನ ಕ್ರಮವಹಿಸಲಾಗುವುದು.

**ಸಂಖ್ಯೆ: ಇಡಿ 49 ಯುಆರ್‌ಸಿ 2026**

(ಡಾ: ಎಂ.ಸಿ. ಸುಧಾಕರ್)

**ಉನ್ನತ ಶಿಕ್ಷಣ ಸಚಿವರು**